RK

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೈದನೆಯ ಅಧಿವೇಶನ

<u>ಕಾರ್ಯಕಲಾಪಗಳ ಪಟ್ಟಿ</u>

**ಸೋಮವಾರ, ದಿನಾಂಕ:09ನೇ ಜುಲೈ, 2018**
**(ಸಮಯ: ಬೆಳಗ್ಗೆ 10.30 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ) **ಶ್ರೀ ಹೆಚ್.ಡಿ. ಕುಮಾರಸ್ವಾಮಿ** (ಮಾನ್ಯ ಮುಖ್ಯಮಂತ್ರಿಗಳು) ಅವರು:-

01. ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ **ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ** ಮೇಲಿನ 31ನೇ ಮಾರ್ಚ್. 2017ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ವರದಿಯನ್ನು **(ಸಂಖ್ಯೆ-1)** ಸಭೆಯ ಮುಂದಿಡುವುದು.

02. ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ **ಸಾಮಾನ್ಯ ಮತ್ತು ಸಾಮಾಜಿಕ ವಲಯದ** ಮೇಲಿನ 31ನೇ ಮಾರ್ಚ್. 2017ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು ನೀಡಿರುವ ವರದಿಯನ್ನು **(ಸಂಖ್ಯೆ-2)** ಸಭೆಯ ಮುಂದಿಡುವುದು.

RK



## 03. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಎನ್. ರವಿಕುಮಾರ್** ಅವರು ಬೆಂಗಳೂರು, ಧಾರವಾಡ ಹಾಗೂ ರಾಯಚೂರು ಸೇರಿದಂತೆ ಕೃಷಿ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು ಕಳೆದ 20 ದಿನಗಳಿಂದ ತರಗತಿ ಬಹಿಷ್ಕರಿಸಿ, ಖಾಸಗಿ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಆಗುತ್ತಿರುವ ಅನ್ಯಾಯದ ಕುರಿತು ಹೋರಾಟ ನಡೆಸುತ್ತಿದ್ದು, ರಾಜ್ಯದ ಬಡ ಪ್ರತಿಭಾವಂತ ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುವ ಬಗ್ಗೆ **ಮಾನ್ಯ ಕೃಷಿ ಸಚಿವರ** ಗಮನ ಸೆಳೆಯುವುದು.

ಆ) **ಶ್ರೀ ಬಿ.ಜಿ. ಪಾಟೀಲ್** ಅವರು ರಾಜ್ಯದಲ್ಲಿ ಗ್ರಾಮ ಪಂಚಾಯತಿಗಳ ಬೇಡಿಕೆ ಪಟ್ಟಿಯಲ್ಲಿ ಸುಮಾರು 6.00 ಕೋಟಿ ತೆರಿಗೆ ಸಂಗ್ರಹಣೆ ಆಗಿದ್ದು, ಬಡವರನ್ನು ಹೊರತುಪಡಿಸಿ ತೆರಿಗೆ ಸಂಗ್ರಹಣೆಯನ್ನು ಕಡ್ಡಾಯಗೊಳಿಸುವುದಕ್ಕೋಸ್ಕರ ತೆರಿಗೆ ಸಂಗ್ರಹ ವಿಚಾರದಲ್ಲಿ ಏಕರೂಪ ಮಾರ್ಗಸೂಚಿಯನ್ನು ಅನುಸರಿಸುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ** ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ** ಅವರು ಸರ್ಕಾರದಿಂದ ಸ್ಥಾಪಿಸಲಾದ ಸಾವಿರಾರು ಶುದ್ಧ ಕುಡಿಯುವ ನೀರಿನ ಘಟಕಗಳು ಸರಿಯಾದ ನಿರ್ವಹಣೆ ಇಲ್ಲದೆ ಕೆಟ್ಟು ನಿಂತಿದ್ದು, ಕುಡಿಯುವ ನೀರು ಸಿಗದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವ ವಿಷಯವನ್ನು ಪ್ರಸ್ತಾಪಿಸುವುದು. **(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)**

## 05. ವಿತ್ತೀಯ ಕಾರ್ಯಕಲಾಪ

2018-2019ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ.**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**

GJ.Legn.070718